ವಿಷಯ :- ಉತ್ತರಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿರುವ ಒಟ್ಟು ಶಾಲೆಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1037 (1576)

ಎಂ. ಶ್ರೀನಿವಾಸ್ (ಉತ್ತರಹಳ್ಳಿ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಸರ್ಕಾರಿ, ಖಾಸಗಿ, ಅನುದಾನಿತ ಹಾಗೂ ಅನುದಾನರಹಿತ ಪ್ರೌಢಶಾಲೆಗಳೆಷ್ಟು; ಇವುಗಳಲ್ಲಿ ಕನ್ನಡ ಮಾಧ್ಯಮದ ಆಂಗ್ಲ ಮಾಧ್ಯಮದ ಶಾಲೆಗಳೆಷ್ಟು?

ಆ) ಸದರಿ ಪ್ರತಿ ಶಾಲೆಯಲ್ಲಿ ಇರುವ ಅಧ್ಯಾಪಕರುಗಳೆಷ್ಟು? ಎಷ್ಟು ಶಾಲೆಗಳಲ್ಲಿ ಅಧ್ಯಾಪಕ, ಬೋಧಕರುಗಳ ಕೊರತೆ ಇದೆ, ಕೊರತೆ ಇದ್ದರೆ, ಅಧ್ಯಾಪಕ, ಬೋಧಕರುಗಳ ನೇಮಕಾತಿ ಯಾವಾಗ ಮಾಡಲಾಗುವುದು?

ಇ) ಸರ್ಕಾರಿ ಪ್ರೌಢಶಾಲೆ ಬೋಧನೆಗೆ ಮತ್ತು ಅಭಿವೃದ್ಧಿಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ)	ಪ್ರೌಢಶಾಲೆಗಳು	ಸಂಖ್ಯೆ	ಕನ್ನಡ ಮಾಧ್ಯಮ	ಆಂಗ್ಲ ಮಾಧ್ಯಮ
	ಸರ್ಕಾರಿ	15	15	-
	ಖಾಸಗಿ ಅನುದಾನಿತ	27	27	-
	ಖಾಸಗಿ ಅನುದಾನ ರಹಿತ	121	50	62

ಆ) ಸರ್ಕಾರಿ ಪ್ರೌಢಶಾಲೆಗಳಲ್ಲಿ 6 ಸಹಶಿಕ್ಷಕರ ಕೊರತೆಯಿದ್ದು, ಅವುಗಳನ್ನು ತುಂಬಲು ಕ್ರಮಕ್ಕೆಗೊಳ್ಳಲಾಗುತ್ತಿದೆ. ಖಾಸಗಿ ಪ್ರೌಢಶಾಲೆಗಳಲ್ಲಿನ ಸಿಬ್ಬಂದಿಯ ನೇಮಕಾತಿ ಜವಾಬ್ದಾರಿಯು ಸಂಬಂಧಪಟ್ಟ ಆಡಳಿತ ಮಂಡಳಿಯದ್ದಾಗಿದೆ.

ಇ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಉತ್ತಮಪಡಿಸಲು ಶಿಕ್ಷಕರಿಗೆ ಬೋಧನಾ ಮತ್ತು ಬೋಧನಾ ಕ್ರಮದಲ್ಲಿ ಸೂಕ್ತ ತರಬೇತಿ ನೀಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಕಾಲಕಾಲಕ್ಕೆ ಸರಿಯಾದ ಕಿರುಪರೀಕ್ಷೆ ಹಾಗೂ ಘಟಕ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇಕಡಾವಾರು ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳ ಪಟ್ಟಿ ಮಾಡಿ ಅಂತಹ ಶಾಲೆಗಳಿಗೆ ಇಲಾಖಾ ಅಧಿಕಾರಿಗಳನ್ನು

ಹೆಚ್ಚು ಬಾರಿ ಭೇಟಿ ನೀಡಿ ಪ್ರಗತಿ ವೀಕ್ಷಿಸಲು ತಿಳಿಸಿದೆ. ಶಾಲಾ ಸಂಕೀರ್ಣಗಳನ್ನು ರಚಿಸಿ ಈ ಸಂಕೀರ್ಣಗಳ ಮುಖಾಂತರ ಶಿಕ್ಷಕರಿಗೆ ಹೆಚ್ಚಿನ ರೀತಿಯ ತರಗತಿ ವ್ಯವಸ್ಥೆ ಮಾಡಲಾಗಿದೆ. ಶಾಲೆಯಲ್ಲಿರುವ ಗ್ರಂಥಾಲಯ ಮತ್ತು ಪ್ರಯೋಗಾಲಯ ಇವುಗಳನ್ನು ವ್ಯವಸ್ಥಿತವಾಗಿ ಉಪಯೋಗಿಸಲು ಶಿಕ್ಷಕರಿಗೆ ಸೂಚಿಸಿದೆ.

ವಿಷಯ :- ದಕ್ಷಿಣ ಕನ್ನಡ ಜಿಲ್ಲೆಯ ಅನುದಾನಿತ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಸ್ಟಾಪ್-ಗ್ಯಾಪ್ ಉಪನ್ಯಾಸಕರುಗಳ ಸಂಬಳ ಕುರಿತು.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 1038 (1931)

ಶ್ರೀ ಯು. ಆರ್. ಸಭಾಪತಿ (ಉಡುಪಿ) :- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ 19 ಅನುದಾನಿತ ಕಾಲೇಜುಗಳಲ್ಲಿ ಎಷ್ಟು ಜನ ಸ್ಟಾಪ್‌ಗ್ಯಾಪ್ ಉಪನ್ಯಾಸಕರುಗಳು ಕೆಲಸ ಮಾಡುತ್ತಿದ್ದಾರೆ;

ಆ) ಸ್ಟಾಪ್‌ಗ್ಯಾಪ್ ಉಪನ್ಯಾಸಕರುಗಳಿಗೆ ಖಾಯಂ ನೇಮಕಾತಿ ಹೊಂದಿದ ಉಪನ್ಯಾಸಕರುಗಳಿಗೆ ನೀಡಿರುವಷ್ಟೇ ಸಂಬಳವನ್ನು ನೀಡುವ ಸಮಯದಲ್ಲಿ ಹಿರಿಯರನ್ನು ಬಿಟ್ಟು ಕಿರಿಯರಿಗೆ ಕೊಡಲು ಕಾರಣಗಳೇನು; ಈ ತಾರತಮ್ಯವನ್ನು ನೀವಾರಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :-

100

ದಿನಾಂಕ 29-01-92 ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ಕ್ರಮ ಕೈಗೊಳ್ಳಲಾಗುತ್ತದೆ.

ವಿಷಯ :- ರಾಜ್ಯದ ಸರಕಾರಿ ಸಾರ್ವಜನಿಕ ಆಸ್ಪತ್ರೆಗಳಿಗೆ ಹೆಚ್ಚುವರಿ ಹಾಸಿಗೆಗಳ ಮಂಜೂರಾತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1039 (1932)

ಶ್ರೀ ಯು. ಆರ್. ಸಭಾಪತಿ (ಉಡುಪಿ) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಹೆಚ್ಚುವರಿ ಹಾಸಿಗೆಗಳನ್ನು ನೀಡಬೇಕೆನ್ನುವ ಪ್ರಸ್ತಾವನೆ ಸಂಬಂಧಪಟ್ಟ ಅಧಿಕಾರಿಗಳಿಂದ ಶಾಸಕರುಗಳಿಂದ ಸರ್ಕಾರಕ್ಕೆ ಬಂದಿದೆಯೇ? ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?